# ಕೊಲೊಸ್ಸೆಯವರಿಗೆ ಬರೆದ ಪತ್ರ

1 ದೇವರ ಚಿತ್ತಾನುಸಾರ ಕ್ರಿಸ್ತಯೇಸುವಿನ ಅಪೊಸ್ತಲನಾದ
ಪೌಲನು ಬರೆಯುವ ಪತ್ರ. 2ಕೊಲೊಸ್ಸೆಯಲ್ಲಿರುವ
ದೇವಜನರಿಗೆ ಅಂದರೆ ಕ್ರಿಸ್ತನಲ್ಲಿ ನಂಬಿಗಸ್ತರಾದ ಮತ್ತು
ಪವಿತ್ರರಾದ ಸಹೋದರ, ಸಹೋದರಿಯರಿಗೆ ನಾನು ಈ
ಪತ್ರವನ್ನು ನಮ್ಮ ಸಹೋದರನಾದ ತಿಮೊಥೆಯನ ಜೊತೆಗೂಡಿ
ಬರೆಯುತ್ತಿದ್ದೇನೆ. ನಮ್ಮ ತಂದೆಯಾದ ದೇವರಿಂದ ನಿಮಗೆ
ಕೃಪೆಯೂ ಶಾಂತಿಯೂ ದೊರಕಲಿ. 3ನಾವು ಪ್ರಾರ್ಥಿಸುವಾಗ
ಲೆಲ್ಲಾ ನಿಮ್ಮ ವಿಷಯದಲ್ಲಿ ದೇವರಿಗೆ ಸ್ತೋತ್ರ ಸಲ್ಲಿಸುತ್ತೇವೆ.
ನಮ್ಮ ಪ್ರಭುವಾದ ಯೇಸು ಕ್ರಿಸ್ತನ ತಂದೆಯೇ ದೇವರು. 4ನಾವು
ದೇವರಿಗೆ ಸ್ತೋತ್ರ ಮಾಡಲು ಕಾರಣವೇನೆಂದರೆ ಕ್ರಿಸ್ತ ಯೇಸು
ವಿನಲ್ಲಿ ನಿಮಗಿರುವ ನಂಬಿಕೆಯ ಬಗ್ಗೆ, ದೇವಜನರೆಲ್ಲರ ಮೇಲೆ
ನಿಮಗಿರುವ ಪ್ರೀತಿಯ ಬಗ್ಗೆ ಕೇಳಿದ್ದೇವೆ. 5-6ನಿಮಗೆ ನಿರೀಕ್ಷೆ
ಇರುವುದರಿಂದಲೇ ಕ್ರಿಸ್ತನಲ್ಲಿ ನಂಬಿಕೆ ಇಟ್ಟಿದ್ದೀರಿ ಮತ್ತು
ದೇವಜನರನ್ನು ಪ್ರೀತಿಸುತ್ತೀರಿ. ನೀವು ನಿರೀಕ್ಷಿಸುವಂಥವುಗಳು
ನಿಮಗೋಸ್ಕರ ಪರಲೋಕದಲ್ಲಿ ಸಿದ್ಧಮಾಡಲ್ಪಟ್ಟಿವೆ ಎಂಬುದು
ನಿಮಗೆ ತಿಳಿದಿದೆ. ನಿಮಗೆ ತಿಳಿಸಲಾದ ಸತ್ಯವಾಕ್ಯವನ್ನು ಅಂದರೆ
ಸುವಾರ್ತೆಯನ್ನು ನೀವು ಕೇಳಿದಾಗ ಈ ನಿರೀಕ್ಷೆಯ ಬಗ್ಗೆ ತಿಳಿದು
ಕೊಂಡಿರಿ. ಸುವಾರ್ತೆಯು ಪ್ರಪಂಚದ ಎಲ್ಲಾ ಕಡೆಗಳಲ್ಲೂ ವೃದ್ಧಿ
ಯಾಗುತ್ತಿದೆ ಮತ್ತು ಆಶೀರ್ವಾದಕರವಾಗಿದೆ. ನೀವು ಸುವಾರ್ತೆ
ಯನ್ನು ಕೇಳಿ ದೇವರ ಕೃಪೆಯ ಸತ್ಯಾರ್ಥವನ್ನು ತಿಳಿದು
ಕೊಂಡಂದಿನಿಂದ ಸುವಾರ್ತೆಯು ನಿಮ್ಮಲ್ಲಿ ವೃದ್ಧಿಯಾಗುತ್ತಿದೆ
ಮತ್ತು ಜನರಿಗೆ ಆಶೀರ್ವಾದಕರವಾಗಿದೆ. 7ನೀವು ಎಪಫ್ರನಿಂದ
ದೇವರ ಕೃಪೆಯ ಬಗ್ಗೆ ತಿಳಿದುಕೊಂಡಿರಿ. ಅವನು ನಮ್ಮ ಜೊತೆ
ಯಲ್ಲಿಯೇ ಸೇವೆ ಮಾಡುತ್ತಿದ್ದಾನೆ. ನಾವು ಅವನನ್ನು ಪ್ರೀತಿಸು
ತ್ತೇವೆ. ಅವನು ನಮಗೋಸ್ಕರ ಕ್ರಿಸ್ತನ ನಂಬಿಗಸ್ತ ಸೇವಕ
ನಾಗಿದ್ದಾನೆ. 8ಪವಿತ್ರಾತ್ಮ ಪ್ರೇರಿತವಾದ ನಿಮ್ಮ ಪ್ರೀತಿಯ ಬಗ್ಗೆ
ಎಪಫ್ರನು ಸಹ ನಮಗೆ ತಿಳಿಸಿದನು.
9ನಿಮ್ಮ ಬಗ್ಗೆ ಈ ಸಂಗತಿಗಳನ್ನು ಕೇಳಿದ ದಿನದಿಂದ, ನಿಮ
ಗೋಸ್ಕರ ಎಡಬಿಡದೆ ಪ್ರಾರ್ಥಿಸುತ್ತಿದ್ದೇವೆ.

> ದೇವರು ಅಪೇಕ್ಷಿಸುವ ಸಂಗತಿಗಳೆಲ್ಲವನ್ನು ನೀವು
> ಪೂರ್ಣವಾಗಿ ತಿಳಿದುಕೊಳ್ಳಬೇಕೆಂತಲೂ ಆತ್ಮಿಕ
> ಸಂಗತಿಗಳಲ್ಲಿ ಮಹಾಜ್ಞಾನವನ್ನು ಮತ್ತು ತಿಳು
> ವಳಿಕೆಯನ್ನು ಹೊಂದಿಕೊಳ್ಳಬೇಕೆಂತಲೂ,
> 10 ಪ್ರಭುವಿಗೆ ಯೋಗ್ಯರಾಗಿ ನಡೆದು ಪ್ರತಿಯೊಂದು
> ವಿಷಯದಲ್ಲಿ ಆತನನ್ನು ಸಂತೋಷಪಡಿಸ
> ಬೇಕೆಂತಲೂ ನೀವು ಎಲ್ಲಾ ವಿಧವಾದ ಒಳ್ಳೆಯ
> ಕಾರ್ಯಗಳನ್ನು ಮಾಡುತ್ತಾ ದೇವಜ್ಞಾನದಲ್ಲಿ
> ಬೆಳೆಯಬೇಕೆಂತಲೂ
> 11 ಆತನ ಮಹಿಮಾಶಕ್ತಿಯಿಂದ ಪರಿಪೂರ್ಣ ಬಲ
> ಹೊಂದಿ ಆನಂದಪೂರ್ವಕವಾದ ತಾಳ್ಮೆಯನ್ನು,
> ದೀರ್ಘಶಾಂತಿಯನ್ನು ಯಾವಾಗಲೂ ತೋರಿಸು
> ವವರಾಗಿರಬೇಕೆಂತಲೂ ನಾವು ಪ್ರಾರ್ಥಿಸು
> ತ್ತಿದ್ದೇವೆ.

12ಆಗ ನೀವು ಆನಂದದಿಂದ ತಂದೆಗೆ ಕೃತಜ್ಞತಾಸ್ತುತಿ
ಮಾಡಬಲ್ಲಿರಿ. ಬೆಳಕಿನಲ್ಲಿ ವಾಸಿಸುವ ತನ್ನ ಜನರೆಲ್ಲರಿಗೂ
ಆತನು ಸಿದ್ಧಪಡಿಸಿರುವಂಥವುಗಳನ್ನು ಹೊಂದಿಕೊಳ್ಳಲು ಆತನೇ
ನಿಮ್ಮನ್ನು ಯೋಗ್ಯರನ್ನಾಗಿ ಮಾಡಿದನು. 13ದೇವರು ನಮ್ಮನ್ನು
ಅಂಧಕಾರದ ಶಕ್ತಿಯಿಂದ ಬಿಡುಗಡೆ ಮಾಡಿದ್ದಾನೆ. ಆತನು
ನಮ್ಮನ್ನು ತನ್ನ ಪ್ರಿಯ ಮಗನ (ಯೇಸುವಿನ) ರಾಜ್ಯದೊಳಗೆ
ಸೇರಿಸಿದ್ದಾನೆ. 14ಮಗನು ನಮ್ಮ ಪಾಪಗಳಿಗೆ ಪರಿಹಾರ ನೀಡಿ
ದನು. ಆತನಲ್ಲಿಯೇ ನಮ್ಮ ಪಾಪಗಳಿಗೆ ಕ್ಷಮೆ ದೊರೆಯಿತು.

### ನಾವು ಕ್ರಿಸ್ತನ ಕಡೆಗೆ ನೋಡುವಾಗ ದೇವರನ್ನೇ ಕಾಣುತ್ತೇವೆ

15ದೇವರನ್ನು ನೋಡಲು ಯಾವ ವ್ಯಕ್ತಿಗೂ ಸಾಧ್ಯವಿಲ್ಲ.
ಆದರೆ ಯೇಸುವು ದೇವರ ಪ್ರತಿರೂಪಿಯಾಗಿದ್ದಾನೆ. ಸೃಷ್ಟಿಸಲ್ಪಟ್ಟ
ವುಗಳಿಗೆಲ್ಲಾ ಯೇಸು ಅಧಿಪತಿಯಾಗಿದ್ದಾನೆ. 16ಭೂಲೋಕ
ಮತ್ತು ಪರಲೋಕಗಳಲ್ಲಿರುವ ಎಲ್ಲವುಗಳು, ದೃಶ್ಯ ಮತ್ತು
ಅದೃಶ್ಯವಾದವುಗಳು, ಆತ್ಮಿಕ ಶಕ್ತಿಗಳು, ಪ್ರಭುತ್ವಗಳು ಆತನ
ಶಕ್ತಿಯಿಂದ ನಿರ್ಮಿತವಾಗಿವೆ. ಅಧಿಪತಿಗಳು ಮತ್ತು ಅಧಿಕಾರಿ
ಗಳು ಆತನ ಶಕ್ತಿಯಿಂದ ನಿರ್ಮಿತರಾದರು. ಸಮಸ್ತವು ಕ್ರಿಸ್ತನ
ಮೂಲಕವಾಗಿ ಆತನಿಗೋಸ್ಕರ ಸೃಷ್ಟಿಸಲ್ಪಟ್ಟವು. 17ಅವುಗಳಿ
ಗಿಂತ ಮೊದಲೇ ಕ್ರಿಸ್ತನಿದ್ದನು. ಸಮಸ್ತಕ್ಕೂ ಆತನೇ ಆಧಾರ
ಭೂತನಾಗಿದ್ದಾನೆ. 18ಕ್ರಿಸ್ತನು ದೇಹಕ್ಕೆ (ಸಭೆಯ) ಶಿರಸ್ಸಾಗಿ
ದ್ದಾನೆ. ಪ್ರತಿಯೊಂದೂ ಆತನಿಂದಲೇ ಬರುತ್ತದೆ. ಮರಣದಿಂದ
ಎದ್ದುಬಂದ ಆತನೇ ಚೊಚ್ಚಲ ಮಗನು. ಆದ್ದರಿಂದ ಎಲ್ಲಾ
ದರಲ್ಲಿಯೂ ಯೇಸುವೇ ಅತ್ಯಂತ ಪ್ರಾಮುಖ್ಯನಾಗಿದ್ದಾನೆ.
19ಆತನಲ್ಲಿ ತನ್ನ ಸರ್ವಸಂಪೂರ್ಣತೆಯು ನೆಲಸಿರ
ಬೇಕೆಂಬುದೂ, 20ಆತನು ಶಿಲುಬೆಯ ಮೇಲೆ ಸುರಿಸಿದ ರಕ್ತ
ದಿಂದ ಸಮಾಧಾನವನ್ನು ಉಂಟುಮಾಡಿ ಭೂಪರಲೋಕಗಳಲ್ಲಿ
ರುವ ಸಮಸ್ತವನ್ನು ತನಗೆ ಸಂಧಾನಪಡಿಸಿಕೊಳ್ಳಬೇಕೆಂಬುದೂ
ದೇವರ ಚಿತ್ತವಾಗಿತ್ತು.

21ಒಂದು ಕಾಲದಲ್ಲಿ ನೀವು ದೇವರಿಂದ ಬೇರ್ಪಟಿದ್ದಿರಿ,
ದುಷ್ಕೃತ್ಯಗಳನ್ನು ಮಾಡುತ್ತಾ ನಿಮ್ಮ ಮನಸ್ಸುಗಳಲ್ಲಿ ದೇವರಿಗೆ
ಶತ್ರುಗಳಾಗಿದ್ದಿರಿ. 22ಈಗಲಾದರೊ ಕ್ರಿಸ್ತನು ಶರೀರಧಾರಿ
ಯಾಗಿ ಈ ಲೋಕದಲ್ಲಿದ್ದಾಗ ತನ್ನ ಪ್ರಾಣವನ್ನೇ ಕೊಡುವುದರ
ಮೂಲಕ ನಿಮಗೂ ದೇವರಿಗೂ ಸಂಧಾನ ಮಾಡಿದ್ದಾನೆ.

ನಿಮ್ಮನ್ನು ಪರಿಶುದ್ಧರನ್ನಾಗಿಯೂ ನಿಷ್ಕಳಂಕರನ್ನಾಗಿಯೂ
ನಿರ್ದೋಷಿಗಳನ್ನಾಗಿಯೂ ದೇವರ ಸನ್ನಿಧಿಯಲ್ಲಿ ನಿಲ್ಲಿಸ
ಬೇಕೆಂಬುದೇ ಕ್ರಿಸ್ತನ ಉದ್ದೇಶವಾಗಿತ್ತು. 23ನೀವು ಕೇಳಿದ
ಸುವಾರ್ತೆಯ ಮೇಲೆ ನಿಮಗಿರುವ ನಂಬಿಕೆಯಲ್ಲಿ ದೃಢವಾಗಿ
ನೆಲೆಗೊಂಡಿದ್ದು ಅದರಿಂದುಂಟಾಗುವ ನಿರೀಕ್ಷೆಯನ್ನು ಬಿಟ್ಟು
ಹೋಗದಿದ್ದರೆ ಇದು ಸಾಧ್ಯ. ಈ ಸುವಾರ್ತೆಯನ್ನು ಪ್ರಪಂಚದ
ಜನರಿಗೆಲ್ಲ ಸಾರಲಾಗಿದೆ. ಪೌಲನಾದ ನಾನು ಈ ಸುವಾರ್ತೆ
ಯನ್ನು ಸಾರುವ ಸೇವಕನಾದೆನು.

### ಸಭೆಗಾಗಿ ಪೌಲನ ಕಾರ್ಯ

24ನಾನು ನಿಮಗಾಗಿ ಅನುಭವಿಸಿದ ಬಾಧೆಗಳಿಂದ ನನಗೆ
ಸಂತೋಷವಾಗಿದೆ. ಕ್ರಿಸ್ತನು ಸಭೆಯೆಂಬ ತನ್ನ ದೇಹದ
ಮೂಲಕ ಇನ್ನೂ ಅನೇಕ ಸಂಕಟಗಳನ್ನು ಅನುಭವಿಸ
ಬೇಕಾಗಿದೆ. ಈ ಸಂಕಟಗಳಲ್ಲಿ ನಾನು ಅನುಭವಿಸಬೇಕಾದವು
ಗಳನ್ನು ಆತನ ದೇಹಕ್ಕೋಸ್ಕರ ನನ್ನ ದೇಹದಲ್ಲಿ ಅನುಭವಿಸು
ತ್ತೇನೆ. 25ನಾನು ಸಭೆಗೆ ಸೇವಕನಾದೆನು. ಏಕೆಂದರೆ ದೇವರು
ನನಗೆ ವಿಶೇಷವಾದ ಕಾರ್ಯವನ್ನು ಮಾಡುವಂತೆ ಆಜ್ಞಾಪಿ
ಸಿದನು.ಈ ಕಾರ್ಯವು ನಿಮಗೆ ಸಹಾಯ ಮಾಡುವುದು.
ದೇವರ ಉಪದೇಶವನ್ನು ಸಂಪೂರ್ಣವಾಗಿ ತಿಳಿಸುವುದೇ ಆ
ಕಾರ್ಯ. 26ಆದಿಕಾಲದಿಂದಲೂ ಅಡಗಿಸಿಟ್ಟಿದ್ದ ರಹಸ್ಯಸತ್ಯವೇ
ಈ ಉಪದೇಶ. ಈ ಸತ್ಯವನ್ನು ಎಲ್ಲಾ ಜನರಿಗೆ ಮರೆಮಾಡ
ಲಾಗಿತ್ತು. ಈಗಲಾದರೊ ಈ ರಹಸ್ಯಸತ್ಯವನ್ನು ದೇವರ ಪವಿತ್ರ
ಜನರಿಗೆ ತಿಳಿಸಲಾಗಿದೆ. 27ಮಹಿಮಾತಿಶಯವಾದ ಈ ಸತ್ಯವನ್ನು
ಎಲ್ಲಾ ಜನರಿಗೆ ತಿಳಿಸಲು ದೇವರು ತೀರ್ಮಾನಿಸಿದನು. ಈ
ಮಹಾಸತ್ಯವು ಎಲ್ಲಾ ಜನರಿಗಾಗಿ ಪ್ರಕಟವಾಯಿತು. ನಿಮ್ಮ
ಲ್ಲಿರುವ ಕ್ರಿಸ್ತನೇ ಆ ಸತ್ಯವಾಗಿದ್ದಾನೆ. ದೇವರ ಮಹಿಮೆಯಲ್ಲಿ
ಪಾಲುಹೊಂದಲು ಆತನೇ ನಮಗಿರುವ ಏಕೈಕ ನಿರೀಕ್ಷೆ.
28ಆದ್ದರಿಂದಲೇ ನಾವು ಕ್ರಿಸ್ತನ ಬಗ್ಗೆ ಜನರಿಗೆ ತಿಳಿಸುವವ
ರಾಗಿದ್ದೇವೆ. ಪ್ರತಿಯೊಬ್ಬರನ್ನೂ ಬಲಪಡಿಸುವುದಕ್ಕಾಗಿ
ಪ್ರತಿಯೊಬ್ಬರಿಗೂ ಉಪದೇಶಿಸುವುದಕ್ಕಾಗಿ ನಮ್ಮ ಜ್ಞಾನ
ವನ್ನೆಲ್ಲಾ ಉಪಯೋಗಿಸುತ್ತೇವೆ. ಪ್ರತಿಯೊಬ್ಬರನ್ನು ಕ್ರಿಸ್ತನಲ್ಲಿ
ಸಂಪೂರ್ಣ ಆತ್ಮಿಕರನ್ನಾಗಿ ಮಾಡಿ ದೇವರ ಸನ್ನಿಧಿಗೆ ತರಲು
ಪ್ರಯತ್ನಿಸುತ್ತೇವೆ. 29ಕ್ರಿಸ್ತನು ನನಗೆ ನೀಡಿರುವ ಬಲದಿಂದ ಇದ
ಕ್ಕೋಸ್ಕರವೇ ಕೆಲಸ ಮಾಡುತ್ತೇನೆ ಮತ್ತು ಹೋರಾಡುತ್ತೇನೆ.
ಆ ಬಲವೇ ನನ್ನ ಜೀವನದಲ್ಲಿ ಕಾರ್ಯಮಾಡುತ್ತಿದೆ.

2 ನಿಮಗೆ ಸಹಾಯ ಮಾಡಲು ನಾನು ಬಹಳವಾಗಿ ಮಾಡು
ತ್ತಿರುವ ಪ್ರಯತ್ನ ನಿಮಗೆ ತಿಳಿದಿರಬೇಕೆಂಬುದು ನನ್ನ
ಅಪೇಕ್ಷೆ. ಇದಲ್ಲದೆ ಲವೊದಿಕೀಯದಲ್ಲಿರುವವರಿಗೆ ಮತ್ತು
ನನ್ನನ್ನು ಎಂದೂ ನೋಡಿಲ್ಲದವರಿಗೆ ಸಹ ಸಹಾಯ ಮಾಡಲು
ಪ್ರಯತ್ನಿಸುತ್ತಿದ್ದೇನೆ. 2ಅವರೆಲ್ಲರೂ ಆಂತರ್ಯದಲ್ಲಿ ಉತ್ತೇಜಿತ
ರಾಗಿ ಪ್ರೀತಿಯಿಂದ ಒಂದಾಗಿರಬೇಕೆಂದು ಮತ್ತು ತಿಳಿವಳಿಕೆ
ಯಿಂದ ಬರುವ ದೃಢನಂಬಿಕೆಯಲ್ಲಿ ಶ್ರೀಮಂತರಾಗಿರ
ಬೇಕೆಂದು ಆಶಿಸುತ್ತೇನೆ. ಅಂದರೆ ದೇವರ ನಿಗೂಢಸತ್ಯವನ್ನು
ಅವರು ಸಂಪೂರ್ಣವಾಗಿ ತಿಳಿದುಕೊಳ್ಳಬೇಕು. ಸ್ವತಃ ಕ್ರಿಸ್ತನೇ
ಆ ಸತ್ಯ. 3ಕ್ರಿಸ್ತನಲ್ಲಿ ಸರ್ವಜ್ಞಾನವು ಮತ್ತು ತಿಳುವಳಿಕೆಯು
ಬಚ್ಚಿಟ್ಟಿರುವ ನಿಕ್ಷೇಪಗಳಂತಿವೆ. 4ಯಾವನೂ ನಿಮ್ಮನ್ನು
ಸರಿಯೆನಿಸುವ ಸುಳ್ಳು ಮಾತುಗಳಿಂದ ಮೋಸಗೊಳಿಸದಂತೆ ಈ
ಸಂಗತಿಗಳನ್ನು ನಿಮಗೆ ಹೇಳಿದ್ದೇನೆ. 5ಅಲ್ಲಿ ನಾನು ನಿಮ್ಮೊಡನೆ
ಇರದಿದ್ದರೂ ನನ್ನ ಮನಸ್ಸು ನಿಮ್ಮೊಡನಿರುತ್ತದೆ. ನಿಮ್ಮ ಕ್ರಮ
ಬದ್ಧವಾದ ನಡತೆಯನ್ನು ನೋಡಲು ಮತ್ತು ಕ್ರಿಸ್ತನಲ್ಲಿನಟ್ಟಿರುವ
ದೃಢನಂಬಿಕೆಯನ್ನು ಅರಿಯಲು ಬಹಳ ಸಂತೋಷಪಡುತ್ತೇನೆ.

### ಕ್ರಿಸ್ತನಲ್ಲಿ ನೆಲೆಗೊಂಡಿರಿ

6ಪ್ರಭುವಾದ ಕ್ರಿಸ್ತ ಯೇಸುವನ್ನು ನೀವು ಸ್ವೀಕರಿಸಿಕೊಂಡಿರು
ವುದರಿಂದ ಆತನಲ್ಲಿ ನೆಲೆಗೊಂಡಿದ್ದು ಜೀವಿಸಿರಿ. 7ಕ್ರಿಸ್ತನನ್ನು
ಮಾತ್ರ ನೀವು ಅವಲಂಬಿಸಬೇಕು. ಜೀವವೂ ಶಕ್ತಿಯೂ ಆತ
ನಿಂದಲೇ ಬರುತ್ತವೆ. ನಿಮಗೆ ಸತ್ಯವನ್ನು ಉಪದೇಶಿಸಲಾಗಿದೆ.
ನೀವು ಆ ಸತ್ಯ ಬೋಧನೆಯಲ್ಲಿ ದೃಢವಾಗಿ ನೆಲೆಗೊಂಡಿರಬೇಕು
ಮತ್ತು ದೇವರಿಗೆ ಸಲ್ಲತಕ್ಕ ಕೃತಜ್ಞತಾಸ್ತುತಿಯಿಂದ ತುಂಬಿದವ
ರಾಗಿರಬೇಕು. 8ಯಾರೂ ನಿಮ್ಮನ್ನು ಮೋಸಕರವಾದ ಮತ್ತು
ನಿರರ್ಥಕವಾದ ತತ್ವಜ್ಞಾನ ಬೋಧೆಯಿಂದ ತಪ್ಪು ದಾರಿಗೆ ನಡೆಸ
ದಂತೆ ಜಾಗ್ರತೆಯಿಂದಿರಿ. ಆ ತತ್ವ ಜ್ಞಾನಗಳು ಜನರಿಂದ
ಬಂದುವೇ ಹೊರತು ಕ್ರಿಸ್ತನಿಂದಲ್ಲ. ಅವು ಈ ಲೋಕದ ಜನರ
ನಿರರ್ಥಕ ತತ್ವಗಳು. 9ದೇವರ ಸರ್ವಸಂಪೂರ್ಣತೆಯು ಕ್ರಿಸ್ತ
ನಲ್ಲಿ ನೆಲೆಗೊಂಡಿದೆ.(ಕ್ರಿಸ್ತನು ಈ ಲೋಕದಲ್ಲಿದ್ದಾಗಲೂ ಸಹ
ನೆಲೆಗೊಂಡಿತ್ತು.) 10ನೀವೆಲ್ಲರೂ ಕ್ರಿಸ್ತನಲ್ಲಿ ಸಂಪೂರ್ಣರಾಗಿ
ದ್ದೀರಿ. ನಿಮಗೆ ಬೇರೇನೂ ಬೇಕಿಲ್ಲ. ಕ್ರಿಸ್ತನು ಎಲ್ಲ ದೊರೆತನ
ಗಳನ್ನು ಮತ್ತು ಅಧಿಕಾರಗಳನ್ನು ಆಳುತ್ತಾನೆ.
11ಕ್ರಿಸ್ತನಲ್ಲಿ ನೀವು ಬೇರೊಂದು ಸುನ್ನತಿಯನ್ನು
ಪಡೆದಿರುವಿರಿ. ಆ ಸುನ್ನತಿಯು ಕೈಯಿಂದ ಮಾಡಿದ್ದಲ್ಲ. ಅಂದರೆ
ನಿಮ್ಮ ಪಾಪಾಧೀನ ಸ್ವಭಾವದಿಂದ ನಿಮಗೆ ಬಿಡುಗಡೆ
ಯಾಯಿತು. ಇದುವೇ ಕ್ರಿಸ್ತನು ಮಾಡುವ ಸುನ್ನತಿ. 12ನೀವು
ದೀಕ್ಷಾಸ್ನಾನ ಮಾಡಿಸಿಕೊಂಡಾಗ ಕ್ರಿಸ್ತನೊಂದಿಗೆ ಹೂಳಲ್ಪಟ್ಟಿರಿ.
ದೇವರು ಕ್ರಿಸ್ತನನ್ನು ಸತ್ತವರೊಳಗಿಂದ ಎಬ್ಬಿಸುವುದರ ಮೂಲಕ
ತೋರಿದ ಶಕ್ತಿಯಲ್ಲಿ ನಂಬಿಕೆಯಿಡುವುದರ ಮೂಲಕ ನೀವು
ಆ ದೀಕ್ಷಾಸ್ನಾನದಲ್ಲಿ ಕ್ರಿಸ್ತನೊಂದಿಗೆ ಮೇಲಕ್ಕೆ ಎದ್ದುಬಂದಿರಿ.
13ನೀವು ನಿಮ್ಮ ಪಾಪಗಳ ದೆಸೆಯಿಂದ ಮತ್ತು ನಿಮ್ಮ ಪಾಪ
ಸ್ವಭಾವದ ಹಿಡಿತದಿಂದ ಇನ್ನೂ ಮುಕ್ತರಾಗದೆ ಇದ್ದುದರಿಂದ
ಆತ್ಮಿಕವಾಗಿ ಸತ್ತವರಾಗಿದ್ದಿರಿ. ಆದರೆ ದೇವರು ನಿಮಗೆ
ಕ್ರಿಸ್ತನೊಂದಿಗೆ ಜೀವವನ್ನು ದಯಪಾಲಿಸಿದನು. ಆತನು ನಮ್ಮ
ಎಲ್ಲಾ ಪಾಪಗಳನ್ನು ಕ್ಷಮಿಸಿದನು. 14ದೇವರ ನಿಯಮಗಳನ್ನು
ಉಲ್ಲಂಘಿಸಿದ್ದರಿಂದ ನಾವು ಅಪರಾಧಿಗಳಾಗಿದ್ದೆವು. ನಮ್ಮ
ಮೇಲೆ ಹೊರಿಸಲಾದ ದೋಷಾರೋಪಣೆಯ ಪಟ್ಟಿಯಲ್ಲಿ
ನಾವು ಉಲ್ಲಂಘಿಸಿದ ಆಜ್ಞೆಗಳನ್ನೆಲ್ಲ ಲಿಖಿತಗೊಳಿಸಲಾಗಿತ್ತು.
ಆದರೆ ದೇವರು ನಮ್ಮ ಅಪರಾಧಗಳನ್ನೆಲ್ಲ ಕ್ಷಮಿಸಿ ಅವುಗಳನ್ನು
ಶಿಲುಬೆಗೆ ಜಡಿದನು. 15ದೇವರು ತನಗೆ ವಿರೋಧವಾಗಿದ್ದ
ದೊರೆತನಗಳನ್ನೂ ಅಧಿಕಾರಗಳನ್ನೂ ಸೋಲಿಸಿ, ಅವರನ್ನು
ನಿರಾಯುಧರನ್ನಾಗಿ ಮಾಡಿ ಶಿಲುಬೆಯ ವಿಜಯೋತ್ಸವದಲ್ಲಿ
ಅವರನ್ನೂ ಇಡೀ ಲೋಕದ ಎದುರಿನಲ್ಲಿ ಸೆರೆಯಾಳುಗಳನ್ನಾಗಿ
ಮೆರವಣಿಗೆ ಮಾಡಿದನು.

### ಮಾನವ ನಿರ್ಮಿತ ನಿಯಮಗಳನ್ನು ಅನುಸರಿಸಬೇಡಿ

16ಹೀಗಿರುವುದರಿಂದ ತಿಂದು ಕುಡಿಯುವುದರ ಬಗ್ಗೆ ಇಲ್ಲವೆ
ಯೆಹೂದ್ಯರ ಪದ್ಧತಿಗಳ (ಹಬ್ಬಗಳು, ಅಮಾವಾಸ್ಯೆಯ ಆಚರಣೆ

ಗಳು, ಸಬ್ಬತ್ ದಿನಗಳು) ಬಗ್ಗೆಯೂ ನಿಮಗೆ ನಿಯಮಗಳನ್ನು
ರೂಪಿಸಲು ಯಾರಿಗೂ ಅವಕಾಶ ಕೊಡಬೇಡಿ. 17ಪೂರ್ವಕಾಲ
ದಲ್ಲಿ ಈ ಸಂಗತಿಗಳೆಲ್ಲ ಮುಂದೆ ಬರಬೇಕಾಗಿದ್ದವುಗಳ
ಛಾಯೆಗಳಾಗಿದ್ದವು. ಅವುಗಳ ನಿಜರೂಪವು ಕ್ರಿಸ್ತನಲ್ಲಿ ತೋರಿ
ಬಂದಿತು. 18ಕೆಲವರು ದೇವದೂತರ ಪೂಜೆಯಲ್ಲಿಯೂ
ಅತಿವಿನಯವಂತರಂತೆ ನಟಿಸುವುದರಲ್ಲಿಯೂ ಆಸಕ್ತರಾಗಿ
ದ್ದಾರೆ. ಆ ಜನರು ತಾವು ಕಂಡ ದರ್ಶನಗಳ ಬಗ್ಗೆ ಯಾವಾಗಲೂ
ಮಾತನಾಡುತ್ತಿರುತ್ತಾರೆ. ‘‘ನೀವು ಇಂಥಿಂಥ ಕಾರ್ಯಗಳನ್ನು
ಮಾಡದಿರುವುದರಿಂದ ತಪ್ಪಿತಸ್ಥರಾಗಿದ್ದೀರಿ’’ ಎಂದು ಆ ಜನರು
ನಿಮ್ಮ ಬಗ್ಗೆ ಹೇಳಲು ಅವಕಾಶ ಕೊಡಬೇಡಿ. ಅವರ ಪ್ರಾಪಂಚಿಕ
ಆಲೋಚನೆಯು ಅವರನ್ನು ನಿಷ್ಕಾರಣವಾಗಿ ಗರ್ವದಿಂದ
ಉಬ್ಬಿಸುತ್ತದೆ. 19ಆ ಜನರು ತಮ್ಮನ್ನು ಕ್ರಿಸ್ತನೆಂಬ ಶಿರಸ್ಸಿನ
ಅಧೀನಕ್ಕೆ ಒಳಪಡಿಸುವುದಿಲ್ಲ. ಇಡೀ ದೇಹವು ಆತನನ್ನೇ
ಅವಲಂಬಿಸಿಕೊಂಡಿದೆ. ಆತನಿಂದಲೇ ದೇಹದ ಅಂಗಾಂಗಗಳು
ಇತರ ಅಂಗಗಳ ಬಗ್ಗೆ ಚಿಂತಿಸುತ್ತವೆ ಮತ್ತು ಪರಸ್ಪರ ಸಹಾಯ
ಮಾಡುತ್ತವೆ. ಇದರಿಂದ ದೇಹವು ಬಲಗೊಂಡು ಒಂದಾಗಿ
ಕೂಡಿಸಲ್ಪಡುತ್ತದೆ. ಹೀಗೆ, ದೇವರ ಇಚ್ಛೆಯಂತೆ ದೇಹವು
ಬೆಳೆಯುತ್ತದೆ.

20ನೀವು ಕ್ರಿಸ್ತನೊಂದಿಗೆ ಸತ್ತು ಪ್ರಾಪಂಚಿಕವಾದ
ನಿರರ್ಥಕ ನಿಯಮಗಳಿಂದ ಬಿಡುಗಡೆ ಹೊಂದಿದ್ದೀರಿ. ಹೀಗಿ
ದ್ದರೂ ನೀವು ಈ ಲೋಕಕ್ಕೆ ಸೇರಿದವರಂತೆ ವರ್ತಿಸುವುದೇಕೆ?
ಈ ನಿಯಮಗಳನ್ನು ಏಕೆ ಅನುಸರಿಸುತ್ತಿರುವಿರಿ ಎಂಬುದೇ ನನ್ನ
ಮಾತಿನ ಅರ್ಥ: 21‘‘ಇದನ್ನು ತಿನ್ನಬೇಡ’’, ‘‘ಅದರ ರುಚಿ
ನೋಡಬೇಡ’’, ‘‘ಅದನ್ನು ಮುಟ್ಟಬೇಡ’’ ಎಂದು
ಹೇಳುವುದೇಕೆ? 22ಪ್ರಾಪಂಚಿಕ ವಿಷಯಗಳ ಕುರಿತಾದ ಈ
ನಿಯಮಗಳೆಲ್ಲ ಬಳಸಿದ ಮೇಲೆ ನಾಶವಾಗುತ್ತವೆ. ಅವುಗಳು
ಜನರ ಆಜ್ಞೆ ಮತ್ತು ಜನರ ಉಪದೇಶಗಳೇ ಹೊರತು
ದೇವರವಲ್ಲ. 23ಈ ನಿಯಮಗಳು ನೋಡುವುದಕ್ಕೆ ಬುದ್ಧಿ
ಯುಳ್ಳವಾಗಿವೆ. ಆದರೆ ಅತಿವಿನಯವಂತರಂತೆ ನಟಿಸಲು
ಮತ್ತು ತಮ್ಮ ದೇಹಗಳನ್ನು ದಂಡಿಸಲು ಜನರನ್ನು ಪ್ರೇರೇಪಿಸುವ
ಅವುಗಳು ಕೇವಲ ಮಾನವ ನಿರ್ಮಿತವಾದ ಧರ್ಮದ ಒಂದು
ಭಾಗವಾಗಿವೆ. ಆದರೆ ಪಾಪಸ್ವಭಾವವು ಇಚ್ಛಿಸುವ ದುಷ್ಟಕಾರ್ಯ
ಗಳನ್ನು ಮಾಡದಂತೆ ಅವು ಜನರಿಗೆ ಯಾವ ಸಹಾಯವನ್ನೂ
ಮಾಡುವುದಿಲ್ಲ.

## ಕ್ರಿಸ್ತನಲ್ಲಿ ನಿಮ್ಮ ಹೊಸ ಜೀವನ

3 ನೀವು ಕ್ರಿಸ್ತನ ಜೊತೆಯಲ್ಲಿ ಜೀವಂತವಾಗಿ ಎದ್ದು
ಬಂದಿರುವುದರಿಂದ ಪರಲೋಕದವುಗಳನ್ನು ಪಡೆಯಲು
ಪ್ರಯತ್ನಿಸಿರಿ. ಕ್ರಿಸ್ತ ಯೇಸು ಪರಲೋಕದಲ್ಲಿ ದೇವರ ಬಲಗಡೆ
ಆಸನಾರೂಢನಾಗಿದ್ದಾನೆ. 2ಪರಲೋಕದವುಗಳನ್ನು ಮಾತ್ರ
ಆಲೋಚಿಸಿ, ಭೂಲೋಕದವುಗಳನ್ನು ಆಲೋಚಿಸಬೇಡಿ.
3ನಿಮ್ಮ ಹಳೆಯ ಸ್ವಭಾವ ಸತ್ತುಹೋಗಿದೆ, ನಿಮ್ಮ ಹೊಸ ಜೀವವು
ಕ್ರಿಸ್ತನೊಂದಿಗೆ ದೇವರಲ್ಲಿದೆ. 4ಕ್ರಿಸ್ತನೇ ನಿಮ್ಮ ಜೀವ, ಆತನು
ಮರಳಿ ಪ್ರತ್ಯಕ್ಷನಾದಾಗ, ನೀವೂ ಆತನ ಪ್ರಭಾವದೊಂದಿಗೆ
ಪ್ರತ್ಯಕ್ಷರಾಗುವಿರಿ. 5ಆದುದರಿಂದ ದುಷ್ಟಕಾರ್ಯಗಳಾದ
ಲೈಂಗಿಕ ಪಾಪ, ದುರಾಚಾರ, ಕಾಮಾಭಿಲಾಷೆ, ದುರಾಶೆ ಮತ್ತು
ಸ್ವಾರ್ಥತೆಗಳನ್ನು ನಿಮ್ಮ ಜೀವಿತದಿಂದ ತೆಗೆದುಹಾಕಿರಿ.
ಸ್ವಾರ್ಥವು ವಿಗ್ರಹಾರಾಧನೆಗೆ ಸಮವಾಗಿದೆ. 6ಇವು ದೇವರನ್ನು
ಕೋಪಗೊಳಿಸುತ್ತವೆ. 7ಪೂರ್ವಕಾಲದ ನಿಮ್ಮ ದುಷ್ಟಜೀವನ
ದಲ್ಲಿ ಈ ಕಾರ್ಯಗಳನ್ನೆಲ್ಲ ನೀವು ಮಾಡಿರುವಿರಿ.

8ಈಗಲಾದರೊ ಕೋಪ, ಕ್ರೋಧ, ಮತ್ಸರ, ಚುಚ್ಚುಮಾತು
ಮತ್ತು ಧುರ್ಭಾಷೆಗಳನ್ನು ನಿಮ್ಮ ಜೀವಿತದಿಂದ ತೆಗೆದುಹಾಕಿರಿ.
9ಒಬ್ಬರಿಗೊಬ್ಬರು ಸುಳ್ಳು ಹೇಳಬೇಡಿ. ಏಕೆಂದರೆ ನೀವು ನಿಮ್ಮ
ಹಳೆಯ ಪಾಪಪೂರಿತ ಜೀವನವನ್ನು ಮತ್ತು ನಿಮ್ಮ ಮೊದಲಿನ
ಕಾರ್ಯಗಳನ್ನು ಬಿಟ್ಟುಬಿಟ್ಟಿದ್ದೀರಿ. 10ನೀವು ಹೊಸ ಜೀವನ
ವನ್ನು ಆರಂಭಿಸಿರುವಿರಿ. ಈ ಹೊಸ ಜೀವನದಲ್ಲಿ ನೀವು
ನಿಮ್ಮನ್ನು ಸೃಷ್ಟಿಸಿದಾತನ ಹೋಲಿಕೆಯ ಮೇರೆಗೆ ನೂತನರಾಗು
ತ್ತಿದ್ದೀರಿ. ದೇವರ ಬಗ್ಗೆ ನಿಜವಾದ ತಿಳುವಳಿಕೆಯನ್ನು ಈ
ಹೊಸ ಜೀವನ ಕೊಡುತ್ತದೆ. 11ಈ ಹೊಸಜೀವನದಲ್ಲಿ ಗ್ರೀಕರ
ಮತ್ತು ಯೆಹೂದ್ಯರ ಮಧ್ಯದಲ್ಲಾಗಲಿ, ಸುನ್ನತಿಯನ್ನು ಮಾಡಿಸಿ
ಕೊಂಡಿರುವ ಮತ್ತು ಮಾಡಿಸಿಕೊಂಡಿಲ್ಲದ ಜನರ ಮಧ್ಯ
ದಲ್ಲಾಗಲಿ, ಪರದೇಶದವರ ಅಥವಾ ಅನಾಗರೀಕರ ಮಧ್ಯ
ದಲ್ಲಾಗಲಿ, ಗುಲಾಮರ ಅಥವಾ ಸ್ವತಂತ್ರರಾದ ಜನರ ಮಧ್ಯ
ದಲ್ಲಾಗಲಿ ಯಾವ ಭೇದವೂ ಇಲ್ಲ. ಎಲ್ಲಾ ವಿಶ್ವಾಸಿ
ಗಳಲ್ಲಿಯೂ ಕ್ರಿಸ್ತನಿದ್ದಾನೆ. ಅವರಿಗೆ ಕ್ರಿಸ್ತನೊಬ್ಬನೇ ಅಗತ್ಯ.

12ದೇವರು ನಿಮ್ಮನ್ನು ಆರಿಸಿಕೊಂಡಿದ್ದಾನೆ ಮತ್ತು ನಿಮ್ಮನ್ನು
ತನ್ನ ಪವಿತ್ರ ಜನರನ್ನಾಗಿಸಿದ್ದಾನೆ. ಆತನು ನಿಮ್ಮನ್ನು
ಪ್ರೀತಿಸುತ್ತಾನೆ. ಹೀಗಿರಲಾಗಿ ಕನಿಕರ, ದಯೆ, ದೀನತೆ,
ವಿನಯಶೀಲತೆ, ಶಾಂತಿ, ಸಹನೆ ಎಂಬ ಸದ್ಗುಣಗಳನ್ನು
ಧರಿಸಿಕೊಳ್ಳಿರಿ. 13ಒಬ್ಬರನ್ನೊಬ್ಬರು ಸಹಿಸಿಕೊಳ್ಳಿರಿ. ಬೇರೆ
ಯವರ ಮೇಲೆ ಹೇಳುವಂಥ ದೂರುಗಳು ನಿಮ್ಮಲ್ಲಿದ್ದರೂ
ಕ್ಷಮಿಸಿಬಿಡಿರಿ. ಪ್ರಭುವು ನಿಮ್ಮನ್ನು ಕ್ಷಮಿಸಿದ್ದರಿಂದ ನೀವೂ
ಇತರರನ್ನು ಕ್ಷಮಿಸಿರಿ. 14ಎಲ್ಲಕ್ಕಿಂತ ಹೆಚ್ಚಾಗಿ ನಿಮ್ಮಲ್ಲಿ ಪ್ರೀತಿ
ಯಿರಲಿ. ಪ್ರೀತಿಯು ನಿಮ್ಮನ್ನೆಲ್ಲರನ್ನೂ ಸಂಪೂರ್ಣವಾದ
ಒಗ್ಗಟ್ಟಿನಲ್ಲಿರಿಸುವುದು. 15ಕ್ರಿಸ್ತನು ನೀಡುವ ಶಾಂತಿಯು ನಿಮ್ಮ
ಆಲೋಚನೆಗಳನ್ನೆಲ್ಲ ತನ್ನ ಹತೋಟಿಯಲ್ಲಿಟ್ಟುಕೊಂಡಿರಲಿ.
ನೀವೆಲ್ಲರೂ ಒಂದೇ ದೇಹಕ್ಕೆ ಸೇರಿದವ ರಾದ್ದರಿಂದ
ಶಾಂತಿಯಿಂದಿರಲು ಕರೆಯಲ್ಪಟ್ಟಿದ್ದೀರಿ. ಯಾವಾ ಗಲು
ಕೃತಜ್ಞರಾಗಿರಿ. 16ಕ್ರಿಸ್ತನ ಉಪದೇಶವು ನಿಮ್ಮ ಅಂತ ರಂಗದಲ್ಲಿ
ಸಮೃದ್ಧವಾಗಿ ನೆಲಸಿರಲಿ. ನೀವು ದೇವರಿಂದ ಕಲಿತು
ಕೊಂಡದ್ದನ್ನು ಉಪದೇಶಿಸುವುದಕ್ಕೂ ಒಬ್ಬರನ್ನೊಬ್ಬರು ಬಲ
ಪಡಿಸುವುದಕ್ಕೂ ಉಪಯೋಗಿಸಿರಿ. ನಿಮ್ಮ ಹೃದಯದಲ್ಲಿ
ದೇವರಿಗೆ ಕೃತಜ್ಞರಾಗಿದ್ದು ಹಾಡುಗಳನ್ನು, ಕೀರ್ತನೆಗಳನ್ನು,
ಸಂಗೀತಗಳನ್ನು ಹಾಡಿರಿ. 17ನೀವು ನುಡಿಯಿಂದಾಗಲಿ, ನಡೆ
ಯಿಂದಾಗಲಿ ಏನು ಮಾಡಿದರೂ ಅದೆಲ್ಲವನ್ನೂ ನಿಮ್ಮ ಪ್ರಭು
ವಾದ ಯೇಸುವಿಗಾಗಿ ಮಾಡಿರಿ. ನೀವು ಏನು ಮಾಡಿದರೂ
ಯೇಸುವಿನ ಮೂಲಕ ತಂದೆಯಾದ ದೇವರಿಗೆ ಕೃತಜ್ಞತೆಯನ್ನು
ಸಲ್ಲಿಸಿರಿ.

## ಇತರರೊಂದಿಗೆ ನಿಮ್ಮ ಹೊಸ ಜೀವನ

18ಸ್ತ್ರೀಯರೇ, ನಿಮ್ಮ ಗಂಡಂದಿರಿಗೆ ವಿಧೇಯರಾಗಿರಿ. ಇದು
ಪ್ರಭುವಿನಲ್ಲಿ ನೀವು ಮಾಡುವ ಯೋಗ್ಯ ಕಾರ್ಯವಾಗಿದೆ.
19ಪುರುಷರೇ, ನಿಮ್ಮ ಪತ್ನಿಯರನ್ನು ಪ್ರೀತಿಸಿ, ಅವರೊಡನೆ
ಸಾತ್ವಿಕರಾಗಿರಿ. 20ಮಕ್ಕಳೇ, ನಿಮ್ಮ ತಂದೆತಾಯಿಗಳಿಗೆ ಎಲ್ಲಾ

ವಿಷಯಗಳಲ್ಲಿಯೂ ವಿಧೇಯರಾಗಿರಿ. ಇದು ಪ್ರಭುವಿಗೆ
ಸಂತೋಷವನ್ನು ಉಂಟುಮಾಡುವುದು. [21]ತಂದೆಗಳೇ, ನಿಮ್ಮ
ಮಕ್ಕಳಿಗೆ ಕಿರುಕುಳಕೊಡಬೇಡಿ. ಇಲ್ಲವಾದರೆ ಅವರು ಕುಂದಿ
ಹೋಗುವರು. [22]ಸೇವಕರೇ, ಎಲ್ಲಾ ಕಾರ್ಯಗಳಲ್ಲಿಯೂ
ನಿಮ್ಮ ಯಜಮಾನರಿಗೆ ವಿಧೇಯರಾಗಿರಿ. ಅವರ ಮೆಚ್ಚಿಕೆ
ಯನ್ನು ಗಳಿಸುವುದಕ್ಕಾಗಿ ಅವರ ಕಣ್ಣೆದುರಿನಲ್ಲಿ ಮಾತ್ರ ಸೇವೆ
ಮಾಡದಿರಿ. ನೀವು ಪ್ರಭುವಿಗೆ ಭಯಪಡುವುದರಿಂದ ನಿಮ್ಮ
ಯಜಮಾನರಿಗೆ ಯಥಾರ್ಥವಾಗಿ ಸೇವೆ ಮಾಡಿರಿ. [23]ಎಲ್ಲಾ
ಕಾರ್ಯಗಳನ್ನು ನಿಮ್ಮಿಂದಾದಷ್ಟು ಅತ್ಯುತ್ತಮವಾಗಿಯೇ
ಮಾಡಿರಿ. ಯಾವುದೇ ಕಾರ್ಯವನ್ನಾಗಲಿ ಜನರಿಗಾಗಿ ಮಾಡದೆ
ಪ್ರಭುವಿಗಾಗಿ ಮಾಡಿರಿ. [24]ಪ್ರಭುವಿನಿಂದಲೇ ನಿಮಗೆ ಪ್ರತಿಫಲ
ದೊರೆಯುತ್ತದೆ ಎಂಬುದನ್ನು ಜ್ಞಾಪಕದಲ್ಲಿಟ್ಟುಕೊಂಡಿರಿ.
ಆತನು ತನ್ನ ಜನರಿಗೆ ಮಾಡಿದ ವಾಗ್ದಾನವು ನಿಮ್ಮ ನೆನಪಿ
ನಲ್ಲಿರಲಿ. [25]ಅನ್ಯಾಯ ಮಾಡುವವನು ಅದಕ್ಕೆ ತಕ್ಕ ಶಿಕ್ಷೆಯನ್ನು
ಪಡೆಯುವನು. ಪ್ರಭುವಿನಲ್ಲಿ ಪಕ್ಷಪಾತವಿಲ್ಲ.

4 ಯಜಮಾನರೇ, ನಿಮ್ಮ ಸೇವಕರಿಗೆ ನ್ಯಾಯವಾದದ್ದನ್ನೂ
ಸರಿಯಾದದ್ದನ್ನೂ ಮಾಡಿರಿ. ಪರಲೋಕದಲ್ಲಿ ನಿಮಗೂ
ಒಬ್ಬ ಯಜಮಾನನಿದ್ದಾನೆ ಎಂಬುದು ನಿಮ್ಮ ಜ್ಞಾಪಕದಲ್ಲಿರಲಿ.

### ಕ್ರೈಸ್ತರು ಮಾಡತಕ್ಕ ಕಾರ್ಯಗಳು

[2]ಪ್ರಾರ್ಥನೆಯನ್ನು ತಪ್ಪದೆ ಮಾಡಿರಿ, ನೀವು ಪ್ರಾರ್ಥಿಸು
ವಾಗ, ಯಾವಾಗಲೂ ದೇವರಿಗೆ ಕೃತಜ್ಞತೆಯನ್ನು ಸಲ್ಲಿಸಿರಿ.
[3]ನಮಗಾಗಿಯೂ ನೀವು ಪ್ರಾರ್ಥಿಸಿ. ಜನರಿಗೆ ದೇವರ
ಸಂದೇಶವನ್ನು ತಿಳಿಸಲು ಅನುಕೂಲವಾದ ಸಂದರ್ಭವನ್ನು
ಆತನು ನಿಮಗೆ ದಯಪಾಲಿಸುವಂತೆ ಪ್ರಾರ್ಥಿಸಿರಿ. ದೇವರು
ಕ್ರಿಸ್ತನ ಬಗ್ಗೆ ತಿಳಿಸಿರುವ ಗುಪ್ತಸತ್ಯವನ್ನು ನಾವು ಬೋಧಿಸಲಾಗು
ವಂತೆ ಪ್ರಾರ್ಥಿಸಿರಿ. ನಾನು ಈ ಸತ್ಯವನ್ನು ಬೋಧಿಸಿದ್ದರಿಂದಲೇ
ಈಗ ಸೆರೆಮನೆಯಲ್ಲಿದ್ದೇನೆ. [4]ಈ ಸತ್ಯವನ್ನು ನಾನು ಜನರಿಗೆ
ಸ್ಪಷ್ಟವಾಗಿಯೂ ಸರಳವಾಗಿಯೂ ತಿಳಿಸಲು ಸಾಧ್ಯವಾಗುವಂತೆ
ಪ್ರಾರ್ಥಿಸಿರಿ. [5]ಅವಿಶ್ವಾಸಿಗಳೊಂದಿಗೆ ವ್ಯವಹರಿಸುವಾಗ ಜ್ಞಾನ
ವುಳ್ಳವರಾಗಿರಿ. ನಿಮ್ಮ ಸಮಯವನ್ನು ಅತ್ಯುತ್ತಮವಾದ ರೀತಿ
ಯಲ್ಲಿ ಬಳಸಿರಿ. [6]ನೀವು ಮಾತನಾಡುವಾಗಲೆಲ್ಲಾ ದಯೆಯು
ಳ್ಳವರಾಗಿಯೂ ಜ್ಞಾನವುಳ್ಳವರಾಗಿಯೂ ಮಾತನಾಡಿರಿ. ಆಗ
ಪ್ರತಿಯೊಬ್ಬರಿಗೂ ಯೋಗ್ಯವಾದ ರೀತಿಯಲ್ಲಿ ಉತ್ತರಿಸಲು
ಶಕ್ತರಾಗುವಿರಿ.

### ಪೌಲನೊಂದಿಗಿರುವ ಜನರನ್ನು ಕುರಿತ ಸುದ್ದಿ

[7]ತುಖಿಕನು ಕ್ರಿಸ್ತನಲ್ಲಿ ನನ್ನ ಪ್ರೀತಿಯ ಸಹೋದರನಾಗಿ
ದ್ದಾನೆ. ನನ್ನೊಡನೆ ಅವನೂ ಪ್ರಭುವಿನಲ್ಲಿ ನಂಬಿಗಸ್ತನಾದ
ಸೇವಕನೂ ದಾಸನೂ ಆಗಿದ್ದಾನೆ. ನನಗೆ ಸಂಭವಿಸುತ್ತಿರುವು
ದನ್ನೆಲ್ಲ ಅವನು ನಿಮಗೆ ತಿಳಿಸುತ್ತಾನೆ. [8]ಆದಕಾರಣವೇ ನಾನು
ಅವನನ್ನು ಕಳುಹಿಸುತ್ತಿದ್ದೇನೆ. ನಾವು ಹೇಗಿರುವೆವು ಎಂಬುದನ್ನು
ನೀವು ತಿಳಿದುಕೊಳ್ಳಬೇಕೆಂಬುದು ನನ್ನ ಅಪೇಕ್ಷೆ. ನಿಮ್ಮನ್ನು
ಪ್ರೋತ್ಸಾಹಿಸಲು ನಾನು ಅವನನ್ನು ಒನೇಸಿಮನ ಜೊತೆಯಲ್ಲಿ
ಕಳುಹಿಸುತ್ತಿದ್ದೇನೆ. [9]ಒನೇಸಿಮನು ಕ್ರಿಸ್ತನಲ್ಲಿ ನಂಬಿಗಸ್ತನಾದ
ಪ್ರೀತಿಯ ಸಹೋದರನಾಗಿದ್ದಾನೆ. ಅವನು ನಿಮ್ಮ ಊರಿ
ನವನೇ. ಇಲ್ಲಿ ಸಂಭವಿಸಿದ್ದೆಲ್ಲವನ್ನುಅವರು ನಿಮಗೆ ತಿಳಿಸುತ್ತಾರೆ.
[10]ಅರಿಸ್ತಾರ್ಕನು ವಂದನೆ ತಿಳಿಸಿದ್ದಾನೆ. ಅವನೂ ನನ್ನೊಡನೆ
ಸೆರೆಯಲ್ಲಿದ್ದಾನೆ. ಬಾರ್ನಬನಿಗೆ ಸೋದರ ಬಾಂಧವ್ಯವುಳ್ಳ
ಮಾರ್ಕನೂ ವಂದನೆಯನ್ನು ಹೇಳುತ್ತಾನೆ. (ಮಾರ್ಕನ ಬಗ್ಗೆ
ನೀವು ಏನು ಮಾಡಬೇಕೆಂಬುದನ್ನು ನಾನು ಈಗಾಗಲೇ
ಹೇಳಿದ್ದೇನೆ. ಅವನು ಬಂದರೆ ಅವನನ್ನು ಸ್ವಾಗತಿಸಿರಿ.)
[11]ಯೇಸುವು (ಯುಸ್ತನೆಂದೂ ಅವನನ್ನು ಕರೆಯುತ್ತಾರೆ.) ಸಹ
ವಂದನೆಯನ್ನು ಹೇಳುತ್ತಾನೆ. ಯೆಹೂದ್ಯರಲ್ಲಿ ವಿಶ್ವಾಸಿಗಳಾ
ಗಿರುವ ಇವರು ಮಾತ್ರವೇ ದೇವರ ರಾಜ್ಯಕ್ಕಾಗಿ ನನ್ನ ಜೊತೆ
ಕೆಲಸ ಮಾಡುತ್ತಿದ್ದಾರೆ. ಇವರೇ ನನಗೆ ಆದರಣೆಯಾಗಿದ್ದಾರೆ.
[12]ಎಪಫ್ರನು ಸಹ ವಂದನೆ ತಿಳಿಸಿದ್ದಾನೆ. ಅವನು ಯೇಸು ಕ್ರಿಸ್ತನ
ಸೇವಕನು. ಅವನು ನಿಮ್ಮವರಲ್ಲಿ ಒಬ್ಬನಾಗಿದ್ದಾನೆ. ಅವನು
ಯಾವಾಗಲೂ ನಿಮಗಾಗಿ ಪ್ರಾರ್ಥಿಸುತ್ತಾನೆ. ನೀವು ಆತ್ಮಿಕತೆ
ಯಲ್ಲಿ ಬೆಳೆಯುತ್ತಾ ಸಂಪೂರ್ಣತೆಯನ್ನು ಮುಟ್ಟಬೇಕೆಂತಲೂ
ದೇವರ ಚಿತ್ತವನ್ನು ಪೂರ್ಣವಾಗಿ ತಿಳಿದುಕೊಂಡು ದೃಢವಾಗಿರ
ಬೇಕೆಂತಲೂ ಪ್ರಾರ್ಥಿಸುತ್ತಾನೆ.

[13]ಅವನು ನಿಮಗೋಸ್ಕರ, ಲವೊದಿಕೀಯ ಮತ್ತು
ಹಿರೆಯಾಪೊಲಿಯದ ಜನರಿಗೋಸ್ಕರ ಬಹಳ ಪ್ರಯಾಸಪಟ್ಟು
ಕೆಲಸ ಮಾಡಿದನೆಂಬುದು ನನಗೆ ತಿಳಿದಿದೆ. [14]ದೇಮನು ಮತ್ತು
ಪ್ರೀತಿಯ ಸ್ನೇಹಿತನಾದ ವೈದ್ಯ ಲೂಕನು ವಂದನೆಗಳನ್ನು ಹೇಳು
ತ್ತಾರೆ.

[15]ಲವೊದಿಕೀಯದಲ್ಲಿರುವ ಸಹೋದರ ಸಹೋದರಿ
ಯರಿಗೆ ವಂದನೆಗಳನ್ನು ತಿಳಿಸಿರಿ. ನುಂಫಳಿಗೂ ಅವಳ ಮನೆ
ಯಲ್ಲಿ ಸೇರುವ ಸಭೆಯವರಿಗೂ ವಂದನೆಗಳನ್ನು ತಿಳಿಸಿರಿ. [16]ಈ
ಪತ್ರವನ್ನು ಓದಿದ ನಂತರ ಲವೊದಿಕಿಯದ ಸಭೆಯವರಿಗೂ
ಓದಲು ಕೊಡಿರಿ. ನಾನು ಲವೊದಿಕಿಯದವರಿಗೆ ಬರೆದಿರುವ
ಪತ್ರವನ್ನು ನೀವೂ ಓದಿರಿ. [17]ಅರ್ಖಿಪ್ಪನಿಗೆ, ‘‘ಪ್ರಭುವು ನಿನಗೆ
ವಹಿಸಿರುವ ಸೇವೆಯನ್ನು ಖಂಡಿತವಾಗಿ ನೆರವೇರಿಸಬೇಕು’’
ಎಂದು ತಿಳಿಸಿರಿ.

[18]ನಿಮಗೆ ನನ್ನ ವಂದನೆಗಳು. ಪೌಲನೆಂಬ ನಾನು ನನ್ನ ಸ್ವಂತ
ಕೈಯಿಂದ ಇದನ್ನು ಬರೆದಿದ್ದೇನೆ. ಸೆರೆಮನೆಯಲ್ಲಿರುವ ನನ್ನನ್ನು
ಜ್ಞಾಪಿಸಿಕೊಳ್ಳಿರಿ. ದೇವರ ಕೃಪೆಯು ನಿಮ್ಮೊಂದಿಗಿರಲಿ.

# License Agreement for Bible Texts

***World Bible Translation Center***
***Last Updated: September 21, 2006***

Copyright © 2006 by World Bible Translation Center
All rights reserved.

**These Scriptures:**

- Are copyrighted by World Bible Translation Center.
- Are not public domain.
- May not be altered or modified in any form.
- May not be sold or offered for sale in any form.
- May not be used for commercial purposes (including, but not limited to, use in advertising or Web banners used for the purpose of selling online add space).
- May be distributed without modification in electronic form for non-commercial use. However, they may not be hosted on any kind of server (including a Web or ftp server) without written permission. A copy of this license (without modification) must also be included.
- May be quoted for any purpose, up to 1,000 verses, without written permission. However, the extent of quotation must not comprise a complete book nor should it amount to more than 50% of the work in which it is quoted. A copyright notice must appear on the title or copyright page using this pattern: "Taken from the HOLY BIBLE: EASY-TO-READ VERSION™ © 2006 by World Bible Translation Center, Inc. and used by permission." If the text quoted is from one of WBTC's non-English versions, the printed title of the actual text quoted will be substituted for "HOLY BIBLE: EASY-TO-READ VERSION™." The copyright notice must appear in English or be translated into another language. When quotations from WBTC's text are used in non-saleable media, such as church bulletins, orders of service, posters, transparencies or similar media, a complete copyright notice is not required, but the initials of the version (such as "ERV" for the Easy-to-Read Version™ in English) must appear at the end of each quotation.

Any use of these Scriptures other than those listed above is prohibited. For additional rights and permission for usage, such as the use of WBTC's text on a Web site, or for clarification of any of the above, please contact World Bible Translation Center in writing or by email at distribution@wbtc.com.

World Bible Translation Center
P.O. Box 820648
Fort Worth, Texas 76182, USA
Telephone: 1-817-595-1664
Toll-Free in US: 1-888-54-BIBLE
E-mail: info@wbtc.com

**WBTC's web site –** World Bible Translation Center's web site: http://www.wbtc.org

**Order online –** To order a copy of our texts online, go to: http://www.wbtc.org

**Current license agreement –** *This license is subject to change without notice. The current license can be found at:* http://www.wbtc.org/downloads/biblelicense.htm

**Trouble viewing this file –** If the text in this document does not display correctly, use Adobe Acrobat Reader 5.0 or higher. Download Adobe Acrobat Reader from: http://www.adobe.com/products/acrobat/readstep2.html

**Viewing Chinese or Korean PDFs –** To view the Chinese or Korean PDFs, it may be necessary to download the Chinese Simplified or Korean font pack from Adobe. Download the font packs from: http://www.adobe.com/products/acrobat/acrrasianfontpack.html